## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 1982ರ ಅನುದಾನ ಸಂಹಿತೆಯಡಿ ಅನುದಾನ ಪಡೆಯುತ್ತಿರುವ ವಿಶೇಷ ಶಾಲೆಗಳಲ್ಲಿನ ವಸತಿಯುತ ಮಕ್ಕಳಿಗೆ ನೀಡುತ್ತಿರುವ ಪಥ್ಯಾಹಾರ ವೆಚ್ಚವನ್ನು ಮಾಹೆಯಾನ ರೂ.600/-ಗಳಿಂದ ರೂ.1000/-ಗಳಿಗೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ಮಮಇ/262/ಪಿಹೆಚ್‌ಪಿ/2008, ದಿನಾಂಕ: 18-8-2008

2) ಸರ್ಕಾರದ ಆದೇಶ ಸಂಖ್ಯೆ: ಮಮಇ/107/ಪಿಹೆಚ್‌ಪಿ/2014, ದಿ: 25-6-2014

3) ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ನಿಕಇಗುವಿ/ವಿಶಾರಾಅ/ಸಿ-3/2010-11/2013-14 (ಭಾಗ 1)/2843 ದಿನಾಂಕ: 30-9-2014

ಪ್ರಸ್ತಾವನೆ:

ರಾಜ್ಯದಲ್ಲಿ 1982ರ ಅನುದಾನ ಸಂಹಿತೆಯಡಿ ಅನುದಾನ ಪಡೆಯುತ್ತಿರುವ ವಿಶೇಷ ಶಾಲೆಗಳಲ್ಲಿನ ವಸತಿಯುತ ಮಕ್ಕಳಿಗೆ ದಿನಾಂಕ: 1-8-2008ರಿಂದ ಜಾರಿಗೆ ಬರುವಂತೆ ರೂ.400/-ರಿಂದ ರೂ.600/-ಗಳಿಗೆ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಹೆಚ್ಚಿಸಲು ಮಂಜೂರಾತಿ ನೀಡಲಾಗಿದೆ. ವಿಕಲಚೇತನ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆಯಡಿ ವಿಶೇಷ ಶಾಲೆಗಳಿಗೆ ನೀಡುತ್ತಿರುವ ಅನುದಾನವನ್ನು, ಅಂಗವಿಕಲತೆಯನುಸಾರವಾಗಿ ದ್ವಿಗುಣಗೊಳಿಸಲು ಮೇಲೆ ಕ್ರ.ಸಂ(2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಮಂಜೂರಾತಿ ನೀಡಲಾಗಿದೆ.

ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು 1982ರ ಅನುದಾನ ಸಂಹಿತೆಯಡಿ ಅನುದಾನ ಪಡೆಯುತ್ತಿರುವ ವಿಶೇಷ ಶಾಲೆಗಳಲ್ಲಿನ ವಸತಿಯುತ ಮಕ್ಕಳಿಗೆ ಪಥ್ಯಾಹಾರಕ್ಕಾಗಿ ಹಾಲಿ ನೀಡುತ್ತಿರುವ ರೂ.600/-ಗಳನ್ನು ರೂ.1000/-ಗಳಿಗೆ ಹೆಚ್ಚಿಸಿ ಮಂಜೂರಾತಿ ನೀಡುವಂತೆ ಕೋರಿರುತ್ತಾರೆ.

ಮುಂದುವರೆಸುತ್ತ, ಈ ಯೋಜನೆಗೆ ಲೆಕ್ಕ ಶೀರ್ಷಿಕೆ: 7235-00-101-0-28 ಯೋಜನೆಯಡಿ ಬರುವ 14 ಶಾಲೆಗಳ 1000 ಮಕ್ಕಳಿಗೆ ಪಥ್ಯಾಹಾರಕ್ಕಾಗಿ ರೂ.40 ಲಕ್ಷಗಳ ಹೆಚ್ಚುವರಿ ಆಯವ್ಯಯವನ್ನು ಜಿಲ್ಲಾಪಂಚಾಯಿತಿಗೆ ಬಿಡುಗಡೆ ಮಾಡಲು ಹಾಗೂ ಲೆಕ್ಕ ಶೀರ್ಷಿಕೆ: 2235-00-101-0-28 ಯೋಜನೇತರದಡಿ ಬರುವ 297 ಮಕ್ಕಳಿಗೆ ಪಥ್ಯಾಹಾರಕ್ಕಾಗಿ ರೂ.11.88 ಲಕ್ಷಗಳ ಹೆಚ್ಚುವರಿ ಆಯವ್ಯಯವನ್ನು ಒದಗಿಸುವಂತೆ ಕೋರಿರುತ್ತಾರೆ.

ಪ್ರಸ್ತಾವವನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 383 ಪಿಹೆಚ್‌ಪಿ 2014, ಬೆಂಗಳೂರು**

**ದಿನಾಂಕ: 3-5-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, 1982ರ ಅನುದಾನ ಪಡೆಯುತ್ತಿರುವ ವಿಶೇಷ ಶಾಲೆಗಳಲ್ಲಿನ ವಸತಿಯುತ ಮಕ್ಕಳ ಪಥ್ಯಾಹಾರಕ್ಕಾಗಿ ಹಾಲಿ ನೀಡುತ್ತಿರುವ ಅನುದಾನವನ್ನು ರೂ. 600/-ರಿಂದ ರೂ.1000/-ಗಳಿಗೆ ಹೆಚ್ಚಿಸಲು ಮಂಜೂರಾತಿ ನೀಡಲಾಗಿದೆ.

ಈ ಯೋಜನೆಗೆ ತಗಲುವ ವೆಚ್ಚ ಲೆಕ್ಕ ಶೀರ್ಷಿಕೆ 2235-00-101-0-28 (ಯೋಜನೆ) (2235-02-196-0-03) ರಡಿಯಲ್ಲಿ ರೂ. 40.00 ಲಕ್ಷಗಳನ್ನು ಹಾಗೂ ಲೆಕ್ಕಶೀರ್ಷಿಕೆ: 2235-00-101-0-28 (ಯೋಜನೇತರ) (2235-02-196-0-03)ರಡಿಯಲ್ಲಿ ರೂ. 11.88 ಲಕ್ಷಗಳ ಹೆಚ್ಚುವರಿ ಅನುದಾನವನ್ನು 2014-15ನೇ ಸಾಲಿನ ಪೂರಕ ಅಂದಾಜು 2 ರಲ್ಲಿ ಭರಿಸತಕ್ಕದ್ದು.

..2

ಸಂಖ್ಯೆ 2025
7/3/15

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 996 ವೆಚ್ಚ-3 2014, ದಿನಾಂಕ: 4-12-2014 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಲಿತ)

**ಸರ್ಕಾರದ ಅಧೀನ ಕಾರ್ಯದರ್ಶಿ-2,**
**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ**
**ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ**

ಇವರಿಗೆ:

1. ಮಹಾಲೇಖಪಾಲರು (ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
4. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಸರ್ಕಾರದ ಉಪಕಾರ್ಯದರ್ಶಿರವರು, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಶಾಖಾಧಿಕಾರಿ, ಸ್ತ್ರೀಮರ ಶಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹಿ.ಡಿ.ಪಿ.ಸಿ/ಸೂಚನಾ ಫಲಕ/ಹೆಚ್ಚುವರಿ ಪ್ರತಿಗಳು.